ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ ೧೭೫೬ (೧೯೨೭)

ಸದಸ್ಯರ ಹೆಸರು ಶ್ರೀ ಮುನಿಯಪ್ಪ ಎಸ್ ಎಂ
(ಚಿಕ್ಕಬಳ್ಳಾಪುರ)

ಉತ್ತರಿಸುವ ಸಚಿವರು ಶ್ರೀ ಹೆಚ್ ಕೆ ಕುಮಾರಸ್ವಾಮಿ
(ಮಹಿಳಾ ಮತ್ತು ಮಕ್ಕಳ ಅಬಿವೃದ್ಧಿ ಸಚಿವರು)

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ನಡೆಯುತ್ತಿರುವ ಸರ್ಕಾರಿ ಅಂಗನವಾಡಿ ಕೇಂದ್ರಗಳಿಗೆ ಅಡಿಗೆ ಅನಿಲ ಅಥವಾ ಸೀಮೆಎಣ್ಣೆ ವಿತರಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?	ಬಂದಿದೆ
ಆ)	ಹಾಗಿದ್ದಲ್ಲಿ, ಅಂಗನವಾಡಿ ಕೇಂದ್ರಗಳಿಗೆ ಅಡಿಗೆ ಅನಿಲ ಅಥವಾ ಸೀಮೆಎಣ್ಣೆ ವಿತರಿಸಲು ಸರ್ಕಾರ ಕೈಗೊಂಡ ಕ್ರಮವೇನು?	ದಿನಾಂಕ ೧೧-೧- ೨೦೦೭ ರ ಆಹಾರ ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಇವರ ಪತ್ರದಲ್ಲಿ ಕೇಂದ್ರ ಸರ್ಕಾರದಿಂದ ಸಾರ್ವಜನಿಕ ವಿತರಣಾ ವ್ಯವಸ್ಥೆಗಾಗಿ ನೀಡುತ್ತಿರುವ ಸೀಮೆಎಣ್ಣೆ ಹಂಚಿಕೆ ಕಡಿಮೆಯಿದ್ದು ಅಂಗನವಾಡಿಗಳಿಗೆ ಸೀಮೆಎಣ್ಣೆ ಒದಗಿಸಲು ಸಾಧ್ಯವಿಲ್ಲವೆಂದು ತಿಳಿಸಿರುತ್ತಾರೆ ಅಂಗನವಾಡಿ ಕೇಂದ್ರಗಳಿಗೆ ಗ್ಯಾಸ್ ಸಂಪರ್ಕ ಕಲ್ಪಿಸಲು ಕ್ರಮ ವಹಿಸಲಾಗುತ್ತಿದೆ